೩

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 784 (959) |
| ಮಾನ್ಯ ಸದಸ್ಯರ ಹೆಸರು | : | ಡಾ|| ಎಂ.ಜಿ ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 24.08.2026 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಕುಲಪತಿಗಳ (Vice Chancellors) ನೇಮಕಾತಿಯಲ್ಲಿ ಶೈಕ್ಷಣಿಕ ಅರ್ಹತೆ ಮತ್ತು ಹಿರಿತನಕ್ಕಿಂತ ಜಾತಿ, ರಾಜಕೀಯ ಹಾಗೂ ಹಣದ ಪ್ರಭಾವ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ. |
| (ಆ) | ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ವಿಶ್ವವಿದ್ಯಾಲಯಗಳಿಗೆ ಅರ್ಹ ವ್ಯಕ್ತಿಗಳನ್ನು ನೇಮಿಸಲು ಶೋಧನಾ ಸಮಿತಿಗಳು (Search Committees) ಮಾಡುವ ಶಿಫಾರಸ್ಸುಗಳಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 14ರಡಿ ವಿಶ್ವವಿದ್ಯಾನಿಲಯದಲ್ಲಿ ಕುಲಪತಿಗಳ ನೇಮಕಾತಿಗೆ ಸಂಬಂಧಿಸಿದಂತೆ ಅನುಸರಿಸಬೇಕಾದ ವಿಧಾನವನ್ನು ನಿಗದಿಪಡಿಸಿದ್ದು, ಅದರಂತೆ ಸರ್ಕಾರವು ವಿಶ್ವವಿದ್ಯಾನಿಲಯಗಳಿಗೆ ಕುಲಪತಿಗಳನ್ನು ನೇಮಕಾತಿ ಮಾಡುತ್ತಿದ್ದು, ಈ ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಕಾಯ್ದುಕೊಂಡಿರುತ್ತದೆ.<br><br>ಸದರಿ ಅಧಿನಿಯಮದ 14 (1)(2)(3)(4)ರಲ್ಲಿ ಈ ಕೆಳಕಂಡಂತೆ ಕುಲಪತಿಗಳ ನೇಮಕಾತಿಯ ವಿಧಾನವನ್ನು ನಿಗದಿಪಡಿಸಿರುತ್ತದೆ.<br><br>14 ಕುಲಪತಿ - (1) ಕುಲಪತಿಯು ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು.<br>(2) ರಾಜ್ಯಸರ್ಕಾರವು, ಕುಲಾಧಿಪತಿಯಿಂದ ರಾಜ್ಯಸರ್ಕಾರದಿಂದ, ವಿಶ್ವವಿದ್ಯಾನಿಲಯ ಅನುದಾನ |

...2

| | | |
|---|---|---|
| | | ಆಯೋಗದಿಂದ ಮತ್ತು ಸಿಂಡಿಕೇಟ್‌ನಿಂದ ನಾಮನಿರ್ದೇಶಿತರಾದ ಒಬ್ಬೊಬ್ಬ ವ್ಯಕ್ತಿಯಿಂದ ಕೂಡಿದ ನಾಲ್ಕು ಮಂದಿ ಸದಸ್ಯರನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು. ರಾಜ್ಯ ಸರ್ಕಾರವು, ನಾಲ್ಕು ಸದಸ್ಯರ ಪೈಕಿ ಒಬ್ಬನನ್ನು ಸಮಿತಿಯ ಅಧ್ಯಕ್ಷನನ್ನಾಗಿ ನೇಮಕ ಮಾಡತಕ್ಕದ್ದು. ಉನ್ನತ ಶಿಕ್ಷಣದ ಪ್ರಭಾರದಲ್ಲಿರುವ ಸರ್ಕಾರದ ಕಾರ್ಯದರ್ಶಿ ಅಥವಾ ಸರ್ಕಾರದ ಉಪ ಕಾರ್ಯದರ್ಶಿಯ ದರ್ಜೆಗೆ ಕಡಿಮೆಯಲ್ಲದ ಅವರ ನಾಮನಿರ್ದೇಶಿತನು ಸಮಿತಿಯ ಸಂಚಾಲಕನಾಗಿರತಕ್ಕದ್ದು.<br><br>(3) ರಾಜ್ಯಸರ್ಕಾರದ, ವಿಶ್ವವಿದ್ಯಾನಿಲಯದ ಅಥವಾ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತವಾದ ಯಾವುದೇ ಕಾಲೇಜಿನ ಅಥವಾ ಸಂಸ್ಥೆಯ ವ್ಯವಹಾರಗಳೊಂದಿಗೆ ಸಂಬಂಧವಿರುವ ಯಾವ ವ್ಯಕ್ತಿಯನ್ನೂ ಶೋಧನಾ ಸಮಿತಿಯ ಸದಸ್ಯನನ್ನಾಗಿ ನಾಮನಿರ್ದೇಶನ ಮಾಡತಕ್ಕದ್ದಲ್ಲ.<br><br>(4) ಶೋಧನಾ ಸಮಿತಿಯು, ಖ್ಯಾತ ಶಿಕ್ಷಣ ತಜ್ಞರಾದ ಮೂರು ವ್ಯಕ್ತಿಗಳ ಒಂದು ಪಟ್ಟಿಯನ್ನು ಅಕಾರಾದಿ ಕ್ರಮದಲ್ಲಿ ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ಆ ಪಟ್ಟಿಯನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು. ಅವರು ಅರ್ಹತೆ, ಸಮದರ್ಶಿತ್ವ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಜ್ಯ ಸರ್ಕಾರದ ಸಹಮತಿಯೊಡನೆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಕ ಮಾಡತಕ್ಕದ್ದು: |
| (ಇ) | ಕುಲಪತಿಗಳ ನೇಮಕಾತಿಯಲ್ಲಿ ಸರ್ಕಾರ ಮತ್ತು ಮಾನ್ಯ ರಾಜ್ಯಪಾಲರ (ಕುಲಾಧಿಪತಿಗಳ) ನಡುವಿನ ಭಿನ್ನಾಭಿಪ್ರಾಯ ಹಾಗೂ ರಾಜಕೀಯ ಹಸ್ತಕ್ಷೇಪದಿಂದ ಶಿಕ್ಷಣದ ಗುಣಮಟ್ಟ ಕುಸಿಯುವುದನ್ನು ತಡೆಯಲು ವಿಶ್ವವಿದ್ಯಾಲಯಗಳ ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಉದ್ದೇಶಿಸಿದೆಯೇ: | ವಿಶ್ವವಿದ್ಯಾನಿಲಯಗಳಲ್ಲಿನ ಕುಲಪತಿಗಳ ನೇಮಕಾತಿ ಪ್ರಕ್ರಿಯೆಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ಪ್ರಕರಣ 14ರನ್ವಯ ಕೈಗೊಳ್ಳುತ್ತಿರುವುದರಿಂದ ಕುಲಪತಿಗಳ ನೇಮಕಾತಿಯಲ್ಲಿ ಸರ್ಕಾರ ಮತ್ತು ಮಾನ್ಯ ರಾಜ್ಯಪಾಲರ (ಕುಲಾಧಿಪತಿಗಳ) ನಡುವೆ ಯಾವುದೇ ಭಿನ್ನಾಭಿಪ್ರಾಯ ಇರುವುದಿಲ್ಲ. ಆದ್ದರಿಂದ ವಿಶ್ವವಿದ್ಯಾನಿಲಯ ಕಾಯ್ದೆಗೆ ಯಾವುದೇ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

...3

| | | |
|---|---|---|
| **(ಈ)** | ಕುಲಪತಿ ಹುದ್ದೆಯ ಆಕಾಂಕ್ಷಿಗಳ ಶೈಕ್ಷಣಿಕ ಸಾಧನೆಗಳು (Academic Credentials) ಹಾಗೂ ಪ್ರಬಂಧಗಳನ್ನು ಸಾರ್ವಜನಿಕವಾಗಿ ಪ್ರಕಟಿಸುವ ಅಥವಾ ತಾಂತ್ರಿಕ ಮೌಲ್ಯಮಾಪನಕ್ಕೊಳಪಡಿಸುವ ಯಾವುದೇ ಸ್ಪಷ್ಟ ನೀತಿಯನ್ನು ಸರ್ಕಾರ ರೂಪಿಸಿದೆಯೇ? (ವಿವರ ನೀಡುವುದು) | ವಿಶ್ವವಿದ್ಯಾನಿಲಯಗಳಲ್ಲಿ ಕುಲಪತಿ ಹುದ್ದೆಗಳಿಗೆ ಕುಲಪತಿಗಳನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ಪ್ರಕರಣ 14ರನ್ವಯ ನೇಮಕ ಮಾಡಲಾಗುತ್ತಿದೆ.<br><br>ಆದ್ದರಿಂದ ಕುಲಪತಿ ಹುದ್ದೆಯ ಆಕಾಂಕ್ಷಿಗಳ ಶೈಕ್ಷಣಿಕ ಸಾಧನೆಗಳು (Academic Credentials) ಹಾಗೂ ಪ್ರಬಂಧಗಳನ್ನು ಸಾರ್ವಜನಿಕವಾಗಿ ಪ್ರಕಟಿಸುವ ಅಥವಾ ತಾಂತ್ರಿಕ ಮೌಲ್ಯಮಾಪನಕ್ಕೊಳಪಡಿಸುವ ಯಾವುದೇ ಸ್ಪಷ್ಟ ನೀತಿಯನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

**ಸಂಖ್ಯೆ: ಇಡಿ/444/ಯುಆರ್‌ಸಿ/2026**

**( ಬಸವರಾಜ ರಾಯರಡ್ಡಿ )**

ಉನ್ನತ ಶಿಕ್ಷಣ ಸಚಿವರು